I/102764/2021

ಕರ್ನಾಟಕ ಸರ್ಕಾರ

**ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ**

ಸಂಖ್ಯೆ: DTE-ADMIOEST(3)/22/2021(ಭಾಗ)

ಆಯುಕ್ತರ ಕಛೇರಿ,
ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ,
ಅರಮನೆ ರಸ್ತೆ, ಬೆಂಗಳೂರು-560 001.
ದಿನಾಂಕ: 25.06.2021

**ಸುತ್ತೋಲೆ**

**ವಿಷಯ :** 2020-21ನೇ ಶೈಕ್ಷಣಿಕ ಸಾಲಿನ ಸಮ ಸೆಮಿಸ್ಟರ್(even semester) ಗೆ ಸರ್ಕಾರಿ ಇಂಜಿನಿಯರಿಂಗ್ ಕಾಲೇಜುಗಳಲ್ಲಿ ಅರೆಕಾಲಿಕ ಅತಿಥಿ ಉಪನ್ಯಾಸಕರನ್ನು ನೇಮಕ ಮಾಡಿಕೊಳ್ಳುವ ಬಗ್ಗೆ.

**ಉಲ್ಲೇಖ:** ಸರ್ಕಾರದ ಪತ್ರ ಸಂಖ್ಯೆ: ಇಡಿ/14/ಡಿಟಿಇ/2021, ದಿನಾಂಕ: 18.06.2021

*****

ಮೇಲ್ಕಂಡ ವಿಷಯ ಮತ್ತು ಉಲ್ಲೇಖಗಳಿಗೆ ಸಂಬಂಧಿಸಿದಂತೆ, ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವ ವಿಶ್ವವಿದ್ಯಾಲಯ, ಬೆಳಗಾವಿ ಇವರ 2020-21ನೇ ಸಾಲಿನ ಸಮ ಸೆಮಿಸ್ಟರ್(even semester) ನ ಶೈಕ್ಷಣಿಕ ವೇಳಾಪಟ್ಟಿಯಂತೆ ತಾಂತ್ರಿಕ ಶಿಕ್ಷಣ ಇಲಾಖೆಯ ವ್ಯಾಪ್ತಿಯ ಸರ್ಕಾರಿ ಇಂಜಿನಿಯರಿಂಗ್ ಕಾಲೇಜುಗಳಲ್ಲಿ ಅರೆಕಾಲಿಕ ಅತಿಥಿ ಉಪನ್ಯಾಸಕರುಗಳನ್ನು ಪ್ರಾಂಶುಪಾಲರ ಹಂತದಲ್ಲಿ ನೇಮಿಸಿಕೊಳ್ಳಲು ಕೆಳಕಂಡ ಷರತ್ತು / ನಿಬಂಧನೆಗಳಿಗೊಳಪಟ್ಟು ಅನುಮತಿ ನೀಡಲಾಗಿದೆ.

**ಷರತ್ತು / ನಿಬಂಧನೆಗಳು:-**

1. ಸದರಿ ಸುತ್ತೋಲೆಯೊಂದಿಗೆ ಲಗತ್ತಿಸಿರುವ ಅನುಬಂಧದಲ್ಲಿ ತಿಳಿಸಿರುವ ಸಂಖ್ಯಾ ಮಾಹಿತಿಯ ಗರಿಷ್ಠ ಮಿತಿಯಲ್ಲಿ ಉಪಲಬ್ಧ ಕಾರ್ಯಭಾರದ ಅವಶ್ಯಕತೆಗೆ ಅನುಗುಣವಾಗಿ ಸಿಮೀತಗೊಳಿಸಿ ಅರೆಕಾಲಿಕ ಅತಿಥಿ ಉಪನ್ಯಾಸಕರ ಸೇವೆಯನ್ನು ಪಡೆಯತಕ್ಕದ್ದು;
2. ಸಂಸ್ಥೆಯಲ್ಲಿ ಖಾಯಂ ಬೋಧಕರ ಹುದ್ದೆ ಭರ್ತಿಯಾದ ನಂತರದಲ್ಲಿ ಕಾರ್ಯಭಾರಕ್ಕೆ ಅನುಗುಣವಾಗಿ ಅತಿಥಿ ಉಪನ್ಯಾಸಕರ ಸಂಖ್ಯೆಯನ್ನು ಕಡಿಮೆ ಮಾಡಬೇಕಾದ ಸಂದರ್ಭದಲ್ಲಿ ಅತಿಥಿ ಉಪನ್ಯಾಸಕರ ಜೇಷ್ಠತೆಯಲ್ಲಿ ಕಿರಿಯರಾದವರನ್ನು ಮತ್ತು ಕಡಿಮೆ ಅವಧಿಯ ಸೇವೆ ಸಲ್ಲಿಸಿದವರನ್ನು ಕೈಬಿಡುವುದು;
3. ಅರೆಕಾಲಿಕ ಅತಿಥಿ ಉಪನ್ಯಾಸಕರ ಸೇವೆಯನ್ನು ಸಮ ಸೆಮಿಸ್ಟರ್(even semester) ಗೆ ಮಾತ್ರ ನೇಮಕ ಮಾಡಿಕೊಳ್ಳತಕ್ಕದ್ದು.

**"ಟಿಪ್ಪಣಿ ಮಾನ್ಯ ಆಯುಕ್ತರಿಂದ ಅನುಮೋದಿಸಲ್ಪಟ್ಟಿದೆ"**

**ಜಂಟಿ ನಿರ್ದೇಶಕರು(ಆಡಳಿತ),**
ತಾಂತ್ರಿಕ ಶಿಕ್ಷಣ ಇಲಾಖೆ,
ಬೆಂಗಳೂರು

**ಇವರಿಗೆ:-**

ತಾಂತ್ರಿಕ ಶಿಕ್ಷಣ ಇಲಾಖೆಯ ಅಧೀನದ ಎಲ್ಲಾ ಸರ್ಕಾರಿ ಇಂಜಿನಿಯರಿಂಗ್ ಕಾಲೇಜುಗಳ ಪ್ರಾಂಶುಪಾಲರುಗಳಿಗೆ.

**ಪ್ರತಿ:-**

1. ಜಂಟಿ ನಿರ್ದೇಶಕರು(ಆಡಳಿತ), ತಾಂತ್ರಿಕ ಶಿಕ್ಷಣ ಇಲಾಖೆ, ಬೆಂಗಳೂರು;
2. ನೋಡಲ್ ಅಧಿಕಾರಿ, ಇ-ಆಡಳಿತ, ತಾಂತ್ರಿಕ ಶಿಕ್ಷಣ ಇಲಾಖೆ, ಬೆಂಗಳೂರು;
3. ಆಪ್ತ ಶಾಖೆ, ಆಯುಕ್ತರು, ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ, ಬೆಂಗಳೂರು.

ಅನುಬಂಧ

**2020-21ನೇ ಶೈಕ್ಷಣಿಕ ಸಾಲಿನ ಸಮ ಸೆಮಿಸ್ಟರ್(even semester) ಗೆ ಸರ್ಕಾರಿ ಇಂಜಿನಿಯರಿಂಗ್ ಕಾಲೇಜುಗಳಲ್ಲಿ ಅರೆಕಾಲಿಕ ಅತಿಥಿ ಉಪನ್ಯಾಸಕರನ್ನು ನೇಮಿಸಿಕೊಳ್ಳಲು ಅನುಮತಿ ನೀಡಲಾದ ವಿವರ**

| ಕ್ರ.ಸಂ. | ಸಂಸ್ಥೆಯ ಹೆಸರು | ಅರೆಕಾಲಿಕ ಅತಿಥಿ ಉಪನ್ಯಾಸಕರನ್ನು ನೇಮಿಸಿಕೊಳ್ಳಲು ಅನುಮತಿ ನೀಡಲಾದ ಸಂಖ್ಯೆ |
|---|---|---|
| 1. | ಸರ್ಕಾರಿ ಎಸ್.ಕೆ.ಎಸ್.ಜೆ.ಟಿ. ಸಂಸ್ಥೆ, ಬೆಂಗಳೂರು | 18 |
| 2. | ಸರ್ಕಾರಿ (ಸಂಜೆ) ಎಸ್.ಕೆ.ಎಸ್.ಜೆ.ಟಿ. ಸಂಸ್ಥೆ, ಬೆಂಗಳೂರು | 14 |
| 3. | ಸರ್ಕಾರಿ ಇಂಜಿನಿಯರಿಂಗ್ ಕಾಲೇಜು, ರಾಮನಗರ | 08 |
| 4. | ಸರ್ಕಾರಿ ಇಂಜಿನಿಯರಿಂಗ್ ಕಾಲೇಜು, ಚಾಮರಾಜನಗರ | 23 |
| 5. | ಸರ್ಕಾರಿ ಇಂಜಿನಿಯರಿಂಗ್ ಕಾಲೇಜು, ಕೆ.ಆರ್.ಪೇಟೆ | 16 |
| 6. | ಸರ್ಕಾರಿ ಇಂಜಿನಿಯರಿಂಗ್ ಕಾಲೇಜು, ಕುಶಾಲನಗರ | 14 |
| 7. | ಸರ್ಕಾರಿ ಇಂಜಿನಿಯರಿಂಗ್ ಕಾಲೇಜು, ಹಾಸನ | 21 |
| 8. | ಸರ್ಕಾರಿ ಇಂಜಿನಿಯರಿಂಗ್ ಕಾಲೇಜು, ಹಾವೇರಿ | 14 |
| 9. | ಸರ್ಕಾರಿ ಇಂಜಿನಿಯರಿಂಗ್ ಕಾಲೇಜು, ಕಾರವಾರ | 46 |
| 10. | ಸರ್ಕಾರಿ ಇಂಜಿನಿಯರಿಂಗ್ ಕಾಲೇಜು, ಹೂವಿನಹಡಗಲಿ | 26 |
| 11. | ಸರ್ಕಾರಿ ಇಂಜಿನಿಯರಿಂಗ್ ಕಾಲೇಜು, ರಾಯಚೂರು | 31 |
| 12. | ಸರ್ಕಾರಿ ಇಂಜಿನಿಯರಿಂಗ್ ಕಾಲೇಜು, ತಳಕಲ್ | 20 |
| 13. | ಸರ್ಕಾರಿ ಇಂಜಿನಿಯರಿಂಗ್ ಕಾಲೇಜು, ಗಂಗಾವತಿ | 18 |
| 14. | ಸರ್ಕಾರಿ ಇಂಜಿನಿಯರಿಂಗ್ ಕಾಲೇಜು, ಮೊಸಳೆಹೊಸಳ್ಳಿ | 16 |
| ಒಟ್ಟು | | **285** |

ಜಂಟಿ ನಿರ್ದೇಶಕರು(ಆಡಳಿತ),
ತಾಂತ್ರಿಕ ಶಿಕ್ಷಣ ಇಲಾಖೆ,
ಬೆಂಗಳೂರು